# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 797 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 12.12.2023 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಇಲಾಖೆಯಲ್ಲಿ ಕೈಗಾರಿಕೋದ್ಯಮಕ್ಕೆ ಇರುವ ಸವಲತ್ತುಗಳೇನು; (ವಿವರ ನೀಡುವುದು) | ಕರ್ನಾಟಕ ಸರ್ಕಾರವು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅನೇಕ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದ್ದು, ಅವು ಈ ಕೆಳಗಿನಂತಿವೆ ಮತ್ತು ಅವುಗಳಡಿಯಲ್ಲಿ ದೊರೆಯುವ ಸಾಲ, ಸಹಾಯಧನ ಮತ್ತು ಇತರೆ ಸೌಲಭ್ಯಗಳ ವಿವರಗಳು ಈ ಕೆಳಗಿನಂತಿವೆ:<br><br>1. **ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ** ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ಪಾದನಾ ಘಟಕಗಳಿಗೆ ಗರಿಷ್ಟ ಸಾಲ ರೂ.50.00 ಲಕ್ಷಗಳವರೆಗೆ ಸೇವಾ ಘಟಕಗಳಿಗೆ ರೂ.20.00 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ.15 ರಿಂದ ಶೇ.35 ರವರೆಗೆ ಗರಿಷ್ಠ ರೂ.7.50 ಲಕ್ಷದಿಂದ ರೂ.17.50 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ, ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರು ಪಾವತಿ ಮಾಡಿದ ಅತೀ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>3. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಶೇಕಡ 75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ. ನಿವೇಶನದ ಗರಿಷ್ಟ ವಿಸ್ತೀರ್ಣ 2 ಎಕರೆಗಳು.<br><br>4. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ 60 ರಷ್ಟು ಗರಿಷ್ಟ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br><br>5. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಟ ರೂ.10.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿ ರಹಿತ ಗರಿಷ್ಟ ರೂ.75.00 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ. |

| | | |
|---|---|---|
| | | 6. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ:<br>1. ಮುದ್ರಾಂಕ ಶುಲ್ಕ ವಿನಾಯಿತಿ<br>2. ನೋಂದಣಿ ಶುಲ್ಕ ರಿಯಾಯಿತಿ.<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ<br>5. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>6. ರಫ್ತು ಆದಾರಿತ ಘಟಕಗಳಿಗೆ ರಿಯಾಯಿತಿ.<br>7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ.<br>8. ವಿದ್ಯುತ್ ತೆರಿಗೆ ವಿನಾಯಿತಿ<br>9. ತಾಂತ್ರಿಕಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ<br>10. ಮಳೆನೀರು ಕೊಯ್ಲು / ಸಂರಕ್ಷಣೆ ಸಹಾಯಧನ<br>11. ತಂತ್ರಜ್ಞಾನ ಉನ್ನತೀಕರಣಕ್ಕೆ ಬಡ್ಡಿ ಸಹಾಯಧನ |
| ಆ) | ಕಳೆದ 3 ವರ್ಷಗಳಲ್ಲಿ ಸಣ್ಣ ಕೈಗಾರಿಕೋದ್ಯಮಕ್ಕೆ ಎಷ್ಟು ಜನ ತರಬೇತಿ ಪಡೆದಿರುತ್ತಾರೆ ಯಾವ- ಯಾವ ಉದ್ಯಮ ವಿಭಾಗಗಳಲ್ಲಿ ತರಬೇತಿ ಪಡೆದಿರುತ್ತಾರೆ: (ವಿವರ ನೀಡುವುದು) | ಸಣ್ಣ ಕೈಗಾರಿಕೆ ಇಲಾಖೆಯಿಂದ ನಿರುದ್ಯೋಗಿ ಯುವಕ ಯುವತಿಯರು ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕ್ ಗಳ ಮೂಲಕ ಸಾಲ ಪಡೆಯುವ ಪೂರ್ವದಲ್ಲಿ "ಉದ್ಯಮಶೀಲತಾ ತರಬೇತಿ" ಯನ್ನು ಪಡೆಯಬೇಕಾಗುತ್ತದೆ. ಇದರಲ್ಲಿ ವಿಭಾಗವಾರು ತರಬೇತಿಯನ್ನು ನೀಡಲಾಗುವುದಿಲ್ಲ.<br><br>ಅದರಂತೆ, ಸಣ್ಣ ಕೈಗಾರಿಕೆ ಇಲಾಖೆಯಿಂದ ಪ್ರಧಾನಮಂತ್ರಿಯವರ ಸ್ವಯಂ ಉದ್ಯೋಗ ಸೃಜನೆ ಯೋಜನೆಯಡಿ ಯಲ್ಲಿ ಬ್ಯಾಂಕ್ ಗಳ ಮೂಲಕ ಸಾಲ ಪಡೆದು ಸ್ವಯಂ ಉದ್ಯೋಗ ಕೈಗೊಳ್ಳಲು ನಿರುದ್ಯೋಗಿ ಯುವಕ ಯುವತಿಯರಿಗೆ "ಉದ್ಯಮ ಶೀಲತಾ ತರಬೇತಿಯನ್ನು" ನೀಡಲಾಗುತ್ತಿದ್ದು ಇದರಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ 18664 ಉದ್ಯಮಶೀಲರು ಉದ್ಯಮಶೀಲತಾ ತರಬೇತಿ ಪಡೆದಿರುತ್ತಾರೆ.<br><br>ಈ ತರಬೇತಿಯನ್ನು ಧಾರವಾಡದಲ್ಲಿರುವ ಸಿ-ಡಾಕ್ (ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ), ರೂಡ್ಸೆಟ್ ಗಳ ಮತ್ತು ಇತರೆ ಅರ್ಹ ಸಂಸ್ಥೆಗಳ ಮೂಲಕ ನೀಡಲಾಗುತ್ತದೆ. |
| ಇ) | ತರಬೇತಿ ಪಡೆದ ಅಭ್ಯರ್ಥಿಗಳಿಗೆ ಸರ್ಕಾರದ ವತಿಯಿಂದ ಉದ್ಯಮ ನಡೆಸಲು ಇರುವ ಸಾಲ-ಸೌಲಭ್ಯದ ಸವಲತ್ತುಗಳೇನು: (ವಿವರ ನೀಡುವುದು) | ಉದ್ಯಮಶೀಲತೆ ತರಬೇತಿ ಪಡೆದ ಉದ್ಯಮಶೀಲರಿಗೆ ಪ್ರಧಾನಮಂತ್ರಿಯವರ ಉದ್ಯೋಗ ಸೃಜನೆ ಯೋಜನೆಯಡಿಯಲ್ಲಿ ಸಾಲ ಮತ್ತು ಸಹಾಯಧನವನ್ನು ಈ ಕೆಳಗಿನಂತೆ ಉದ್ಯಮ ಸ್ಥಾಪನೆಗೆ ನೀಡಲಾಗುತ್ತದೆ:<br><br>ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ಪಾದನಾ ಘಟಕಗಳಿಗೆ ಗರಿಷ್ಟ ಸಾಲ ರೂ.50.00 ಲಕ್ಷಗಳವರೆಗೆ ಮತ್ತು ಸೇವಾ ಘಟಕಗಳಿಗೆ ರೂ.20.00 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು. ಹಾಗೂ ಯೋಜನಾ ವೆಚ್ಚದ ಮೇಲೆ ಶೇ.15 ರಿಂದ ಶೇ.35 ರವರೆಗೆ ಗರಿಷ್ಟ ರೂ.7.50 ಲಕ್ಷದಿಂದ ರೂ.17.50 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ. |

ಸಿಐ 142 ಎಸ್‌ಎಸ್‌ಐ 2023

(ಶರಣಬಸಪ್ಪ ದರ್ಶನಾಪೂರ)
ಸಣ್ಣ ಕೈಗಾರಿಕೆ ಮತ್ತು
ಸಾರ್ವಜನಿಕ ಉದ್ದಿಮೆ ಸಚಿವರು